**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ. ಸಿ. ನಂ. 36/2024**

**ಚಾ.ಸಾಃ 15 ಪ್ರಾ.ಸಾಃ 8**

| | |
|---|---|
| ಸಾಕ್ಷಿದಾರನ ಹೆಸರು | ಮಮತಾ ನಾಯ್ಕ |
| ತಂದೆಯ ಹೆಸರು | ಶಂಕರ ನಾಯ್ಕ |
| ವಯಸ್ಸು | 33 ವರ್ಷಗಳು |
| ಉದ್ಯೋಗ | ಪಿ.ಎಸ್.ಐ. ಹೊನ್ನಾವರ ಸಂಚಾರ |
| ವಾಸ್ತವ್ಯ | ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 13-03-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ದಿನಾಂಕ 19-08-2023 ರಿಂದ ಹೊನ್ನಾವರ ಠಾಣೆಯಲ್ಲಿ ಪಿಎಸ್ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 25-11-2023 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ರಾತ್ರಿ 08-15 ಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.238/2023 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-31 ಎಂದು, ಸಾಕ್ಷಿ ಸಹಿಯನ್ನು ನಿಪಿ-31(ಎ) ಎಂದು ಗುರುತಿಸಲಾಯಿತು.

ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-17 ರವರಿಗೆ ಹಸ್ತಾಂತರಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಂ. ಎನ್. ಸುಬ್ರಹ್ಮಣ್ಯರಿಂದಃ**

ಚಾಸಾ-1 ರವರು ಲಿಖಿತ ದೂರನ್ನು ನೀಡಿರುತ್ತಾರೆ. ನಾನು ಹೇಳಿರುವಂತೆಯೇ ಚಾಸಾ-1 ರವರು ದೂರು ಬರೆದಿದ್ದಾರೆ ಎಂದರೆ ಅದು ಸರಿಯಲ್ಲ. ಚಾಸಾ-1 ಯಾವುದೇ ಅಪಘಾತವನ್ನು ನೋಡಿಲ್ಲವಾದ್ದರಿಂದ ಆತ ಯಾವುದೇ ದೂರನ್ನು ಬರೆದುಕೊಂಡು ತರದಿದ್ದರೂ ನಾನೇ ಹೇಳಿ ಅದನ್ನು ಬರೆಸಿದ್ದೇನೆ ಎಂದರೆ ಸರಿಯಲ್ಲ. ಅಪಘಾತ ದಿನವೇ ಆರೋಪಿ ಠಾಣೆಗೆ ಬಂದು ಬೈಕ್ ಸವಾರನ ವಿರುದ್ಧ ದೂರನ್ನು ನೀಡಿದ್ದರೂ ಆತನಿಗೆ ಭಾಷೆ ಬರದೇ ಇರುವ ಕಾರಣಕ್ಕೆ ಆತನ ದೂರನ್ನು ನಾನು ಪಡೆದುಕೊಂಡಿರಲಿಲ್ಲ ಎಂದರೆ ಸರಿಯಲ್ಲ. ಅದೇ ಕಾರಣಕ್ಕೆ ಆರೋಪಿ ಕಾರವಾರ ಎಸ್.ಪಿ.ಯವರಿಗೆ ದೂರನ್ನು ನೊಂದಾಯಿತ ಅಂಚೆ ಮೂಲಕ ಕಳುಹಿಸಿರುತ್ತಾರೆ ಎಂದರೆ ಅದು ಸುಳ್ಳು ಎನ್ನುತ್ತಾರೆ. ಮೃತನ ಕುಟುಂಬದವರಿಗೆ ಸಹಾಯವಾಗುವಂತೆ ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

Sd/-

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**Co-ordinator**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**